ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರುಣ ಶಹಾಪೂರ., ಇವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

## ವಿಷಯ

ವೃತ್ತಿ ಶಿಕ್ಷಣ ಇಲಾಖೆಯ ಸಿಬ್ಬಂದಿಗಳನ್ನು ದಿನಾಂಕ:06.04.2011ರ ವಿಶೇಷ ಕಾನೂನಿನ ಮೂಲಕ ವಿಲೀನಗೊಳಿಸಲಾಗಿದೆ. ಈ ವಿಲೀನಗೊಳಿಸುವ ಸಂದರ್ಭದಲ್ಲಿ ವಿಲೀನಗೊಳ್ಳದೇ ಬಾಕಿ ಉಳಿದಿರುವ ಸಿಬ್ಬಂದಿಗಳ ವಿಲೀನಗೊಳಿಸಲು ಇರುವ ಕಾನೂನು ತೊಡಕುಗಳನ್ನು ಸರಿಪಡಿಸಿಕೊಂಡು ಬಾಕಿ ಉಳಿದಿರುವ ಈ ಸಿಬ್ಬಂದಿಗಳನ್ನೂ ಸಹ ವಿಲೀನಗೊಳಿಸುವಂತೆ ಕೋರಿರುತ್ತಾರೆ.

## ಉತ್ತರ

ಜೆ.ಓ.ಸಿ. ವಿಲೀನ ವಿಧೇಯಕ ದಿನಾಂಕ:06.04.2011ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 22 ಶಾಸನ 2011ರಲ್ಲಿನ ನಿಯಮ 3(1)(ಎ)ರಲ್ಲಿ ಯಾವೊಬ್ಬ, ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನನ್ನು ಆತನಿಗೆ ನೇರವಾಗಿ ಅನ್ವಯಿಸಬಹುದಾದಂಥ ಕಾರಣಗಳಿಗಾಗಿ ಆತನು ಯಾವುದೇ ಸೇವಾಭಂಗವಿಲ್ಲದೆ ಐದು ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕರ್ತವ್ಯ ನಿರ್ವಹಿಸಿದ್ದ ಹೊರತು ವಿಲೀನಗೊಳಿಸತಕ್ಕದ್ದಲ್ಲ ಎಂದು ತಿಳಿಸಲಾಗಿದೆ. ಅದರಂತೆ, ದಿನಾಂಕ:06.04.2011ಕ್ಕೆ ಯಾವುದೇ ಸೇವಾಭಂಗವಿಲ್ಲದೆ ಐದು ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕರ್ತವ್ಯ ನಿರ್ವಹಿಸಿದವರನ್ನು ಮಾತ್ರ ವಿಲೀನಕ್ಕೆ ಪರಿಗಣಿಸಲಾಗಿದೆ.

ಜೆ.ಓ.ಸಿ. ವಿಲೀನ ವಿಧೇಯಕ ದಿನಾಂಕ:06.04.2011ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 22 ಶಾಸನ 2011ರಲ್ಲಿನ ನಿಯಮ 6(1)ರಲ್ಲಿ ಈ ಅಧಿನಿಯಮ ಆರಂಭವಾದ ದಿನಾಂಕದಂದು ಐದು ವರ್ಷಗಳ ಸೇವೆಯನ್ನು ಪೂರ್ಣಗೊಳಿಸದ ಅರೆಕಾಲಿಕ ವೃತ್ತಿ ಶಿಕ್ಷಣ ಆಧಾರಿತ ಕೋರ್ಸುಗಳ ನೌಕರರನ್ನು ಯಾವುದೇ ಸರ್ಕಾರಿ ಸೇವೆಯಲ್ಲಿ ಅಥವಾ ಯಾವುದೇ ಖಾಸಗಿ ಅನುದಾನಿತ ಸಂಸ್ಥೆಯಲ್ಲಿ ಮುಂದುವರೆಸತಕ್ಕದ್ದಲ್ಲ ಅಥವಾ ವಿಲೀನಗೊಳಿಸತಕ್ಕದ್ದಲ್ಲ ಎಂದು ತಿಳಿಸಲಾಗಿದೆ. ಆದ್ದರಿಂದ, ದಿನಾಂಕ:06.04.2011ಕ್ಕೆ ನಿರಂತರವಾಗಿ ಐದು ವರ್ಷ ಪೂರೈಸದ ಜೆ.ಓ.ಸಿ ಬೋಧಕ ಮತ್ತು ಬೋಧಕೇತರರನ್ನು ವಿಲೀನಕ್ಕೆ ಪರಿಗಣಿಸಲು ಅವಕಾಶವಿರುವುದಿಲ್ಲ. ಈಗಾಗಲೇ ಸದರಿಯವರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ.

ಮಾನ್ಯ ಸುಪ್ರೀಂಕೋರ್ಟ್ ನ್ಯಾಯಾಲಯದ ಅಪೀಲು (ಸಿವಿಲ್) 3595-3612 of 1999 ದಿನಾಂಕ:10.04.2006ರ ರಾಜ್ಯ ಸರ್ಕಾರ ಮತ್ತು ಇತರರು ವಿರುದ್ಧ ಉಮಾದೇವಿ ಮತ್ತು ಇತರರು ಪ್ರಕರಣದಲ್ಲಿ ಒಂದು ಬಾರಿ ಕ್ರಮವಾಗಿ ಕ್ರಮಬದ್ಧಗೊಳಿಸಲು ಅವಕಾಶ ನೀಡಿ ಆದೇಶಿಸಿದೆ. ಈ ಮೊದಲೇ ಸರ್ಕಾರವು ದಿನಾಂಕ:06.04.2011ರಂದು ಮಾಡಲಾದ ಸಂಖ್ಯೆ: ಸಂವ್ಯಶಾಇ 22 ಶಾಸನ 2011, ಬೆಂಗಳೂರು ಇದರಲ್ಲಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ಅಧಿನಿಯಮವು ಉರ್ಜಿತವಾಗಿರುತ್ತದೆ. ಆದರೆ, ಸದರಿ ಅಧಿನಿಯಮವನ್ನು ಪುನಃ ತೆರೆಯಲು ಅವಕಾಶವಿರುವುದಿಲ್ಲ ಮತ್ತು ಸದರಿ ಅಧಿನಿಯಮಕ್ಕೆ ತಿದ್ದುಪಡಿ ತರುವುದು ಘನ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನಗಳಿಗೆ ವ್ಯತಿರಿಕ್ತವಾಗುತ್ತದೆ. ಆದುದರಿಂದ, ಸದರಿ ವಿಲೀನ ವಿಧೇಯಕ 2011ನ್ನು ಪುನಃ ತೆರೆಯುವುದಾಗಲೀ ಅಥವಾ ತಿದ್ದುಪಡಿ ಮಾಡುವುದಕ್ಕಾಗಲೀ ಅವಕಾಶ ಇರುವುದಿಲ್ಲವೆಂಬುದು ಸ್ಪಷ್ಟ ನಿರ್ದೇಶನ ನೀಡಿರುವುದರಿಂದ. ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ-2011ನ್ನು ಮತ್ತೆ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ವಿಲೀನಗೊಳ್ಳದೆ ಬಾಕಿ ಉಳಿದಿರುವ ಜೆ.ಓ.ಸಿ. ಸಿಬ್ಬಂದಿಗಳನ್ನು ವಿಲೀನಗೊಳಿಸಲು ಅವಕಾಶವಿಲ್ಲ.

**ಸಂಖ್ಯೆ:ಇಪಿ 09 ಟಿವಿಇ 2022**

**(ಬಿ.ಸಿ.ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು